# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನಾಲ್ಕನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಗುರುವಾರ, ದಿನಾಂಕ:08ನೇ ಫೆಬ್ರವರಿ, 2018**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

| | | | |
|---|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಮೂರನೆಯ ಪಟ್ಟಿ |
| ಆ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಮೂರನೆಯ ಪಟ್ಟಿ |

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2018ನೇ ಫೆಬ್ರವರಿ, 05ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:06-02-2018ರಂದು **ಶ್ರೀ ಎಸ್. ರವಿ**ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

(ಎರಡನೆಯ ದಿನ)

### 03. ಶಾಸನ ರಚನೆ

**<u>ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>**

**ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ ವಿಧೇಯಕ, 2017**

**ಶ್ರೀಮತಿ ಉಮಾಶ್ರೀ** (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

ಅ) **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು, ಬಾಲ ಸೇವಿಕಾ ತರಬೇತಿ ಪಡೆದು ನರ್ಸರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕಿಯರಾಗಿ ಸೇವೆ ಸಲ್ಲಿಸುತ್ತಿರುವವರಿಗೂ ಸಹ ಅನುದಾನಿತ ನೌಕರರಿಗೆ ನೀಡುತ್ತಿರುವಂತೆ ನಿವೃತ್ತಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್** ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಐವನ್ ಡಿ'ಸೋಜಾ** ಅವರು, ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರ ಸಮಸ್ಯೆಗಳಿಗೆ ಹಾಗೂ ಅಡಿಕೆ ಬೆಳೆಗೆ ಆಗುವ ತೊಂದರೆಗಳಿಗೆ ಅಡಿಕೆ ಬೆಳೆಗಾರರ ಮಂಡಳಿಯನ್ನು ರಚಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

ಅ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು, ಕಂದಾಯ ಇಲಾಖೆಯ ಗ್ರಾಮ ಮಟ್ಟದ ಗ್ರಾಮಕರಣೀಕರ ಕಛೇರಿಯಲ್ಲಿನ ಮೂಲ ಸೌಕರ್ಯದ ಕೊರತೆ, ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿ ವಿಳಂಬ ನೀತಿ ಸೇರಿದಂತೆ ಇಲಾಖೆಯಲ್ಲಿನ ಸಮಸ್ಯೆಗಳು ಮತ್ತು ಆಡಳಿತಾತ್ಮಕ ವಿಷಯಗಳಲ್ಲಿನ ಲೋಪದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು, ರಾಜ್ಯದಲ್ಲಿನ ಎಲ್ಲಾ ಮಾದರಿಯ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷಾ ಬೋಧನೆಯನ್ನು ಕಡ್ಡಾಯಗೊಳಿಸಿದ್ದು, ಈ ಬಗ್ಗೆ ಖಚಿತಪಡಿಸಿಕೊಳ್ಳಲು ಸಮಿತಿಯನ್ನು ರಚಿಸುವುದು ಮತ್ತು ನಿಯಮವನ್ನು ಉಲ್ಲಂಘನೆ ಮಾಡುವ ಶಾಲೆಗಳಿಗೆ ದಂಡವನ್ನು ವಿಧಿಸುವ ಜೊತೆಗೆ ಮಾನ್ಯತೆಯನ್ನು ರದ್ದುಪಡಿಸುವಂತಹ ಕಠಿಣವಾದ ನಿಯಮಗಳನ್ನು ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

## ೦೬. ನಿಯಮ ೬೮ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

| | |
|---|---|
| **ಶ್ರೀಯುತರುಗಳಾದ:**<br><br>**ರಮೇಶ್ ಬಾಬು**<br>**ಆರ್. ಚೌಡರೆಡ್ಡಿ ತೂಪಲ್ಲಿ** | ಗಡಿ ಅಭಿವೃದ್ಧಿ ಪ್ರಾಧಿಕಾರದ ಅನುದಾನ ಬಳಕೆಯಲ್ಲಿ ನಡೆದಿರುವ ಅಕ್ರಮ ಅವ್ಯವಹಾರಗಳ ಬಗ್ಗೆ. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**